<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 954

ಸದಸ್ಯರ ಹೆಸರು : ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 24.07.2024

ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಪ್ರಶ್ನೆ | ಉತ್ತರ |
|---|---|
| (ಅ) ಕಳೆದ ವರ್ಷ ಭೀಕರ ಬರಗಾಲದಿಂದ ರಾಜ್ಯದ ರೈತರು ಯಾವ ಯಾವ ಸಂಕಷ್ಟ ಹಾಗೂ ತೊಂದರೆಗಳನ್ನು ಅನುಭವಿಸಿರುತ್ತಾರೆ; (ಪೂರ್ಣ ಮಾಹಿತಿ ನೀಡುವುದು)<br><br>(ಆ) ಮೇಲ್ಕಂಡ ನಷ್ಟಗಳನ್ನು ತುಂಬಿಕೊಡಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳಾವುವು? | 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಳೆಯ ವೈಫಲ್ಯದ ಕಾರಣ, ಸರ್ಕಾರದ ಆದೇಶ ಸಂಖ್ಯೆ: ಕಂಇ 449 ಟಿಎನ್‌ಆರ್ 2023, ದಿನಾಂಕ:13.09.2023, 12.10.2023 ಮತ್ತು 04.11.2023ರ ಆದೇಶಗಳಲ್ಲಿ ಒಟ್ಟು 223 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿರುತ್ತದೆ.<br><br>ಬರಗಾಲದಿಂದ ರಾಜ್ಯದ ರೈತರಿಗೆ ಕುಡಿಯುವ ನೀರು, ಬೆಳೆಹಾನಿ ಹಾಗೂ ಜಾನುವಾರುಗಳಿಗೆ ಮೇವಿನ ತೊಂದರೆಗಳಾಗಿರುವುದು ಕಂಡುಬಂದಿದ್ದು, ಇದನ್ನು ನಿವಾರಿಸಲು ಈ ಕೆಳಕಂಡ ಅವಶ್ಯಕ ತುರ್ತು ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br><br>1) ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿಗೆ ನೀಡಬಹುದಾದ ಪರಿಹಾರದ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11.07.2023 ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ/ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ಮಾರ್ಗಸೂಚಿಗಳಲ್ಲಿ ನಿಗಧಿಪಡಿಸಿರುವ ಪರಿಹಾರ ಮೊತ್ತದಂತೆ ಒಟ್ಟು 38,78,525 ಅರ್ಹ ರೈತ ಫಲಾನುಭವಿಗಳಿಗೆ ರೂ.3535.30 ಕೋಟಿಗಳ ಬೆಳೆಹಾನಿ ಪರಿಹಾರ ಮೊತ್ತವನ್ನು ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ಪರಿಹಾರ ಪಾವತಿಸಲಾಗುತ್ತಿದೆ.<br>2) ಬರಪರಿಹಾರ ನಿರ್ವಹಣೆಗೆ ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ರೂ.324.00 ಕೋಟಿಗಳನ್ನು ರಾಜ್ಯದ ಎಲ್ಲಾ 31 ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆಗೊಳಿಸಲಾಗಿದೆ.<br><br>3) ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ಜಾನುವಾರುಗಳಿಗೆ ಮೇವಿನ ಸಮಸ್ಯೆ ಉಂಟಾಗದಂತೆ ಮುಂಜಾಗ್ರತೆಯಾಗಿ ಮೇವಿನ ಮಿನಿ ಕಿಟ್‌ಗಳನ್ನು ರೈತರಿಗೆ ಪೂರೈಸಲು ರೂ.40.00ಕೋಟಿಗಳ ಅನುದಾನವನ್ನು ಪಶುವೈದ್ಯ ಮತ್ತು ಪಶುಪಾಲನಾ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ. |

| | |
|---|---|
| | 4) ಜಾನುವಾರುಗಳಿಗೆ ಮೇವನ್ನು ಪೂರೈಸಲು ರಾಜ್ಯದಲ್ಲಿ 29 ಗೋಶಾಲೆಗಳನ್ನು ತೆರೆದಿದ್ದು, ಒಟ್ಟು 21314 ಜಾನುವಾರುಗಳಿಗೆ ಆಶ್ರಯ ನೀಡಲಾಗಿರುತ್ತದೆ. 66 ಮೇವಿನ ಮಳಿಗೆಗಳನ್ನು ತೆರೆಯಲಾಗಿರುತ್ತದೆ.<br><br>5) ಬೆಂಗಳೂರಿನ ನಾಗರೀಕರಿಗೆ ಬಾಡಿಗೆ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿರವರಿಗೆ ರೂ.15.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.<br><br>6) ಬರ ಪರಿಸ್ಥಿತಿಯಿಂದ ಉಂಟಾದ ನೀರಿನ ಅಭಾವವನ್ನು ನಿಭಾಯಿಸಲು ಕೃಷಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯಡಿ ರೈತರ ಜಮೀನಿನಲ್ಲಿ ಬಿದ್ದ ಮಳೆ ನೀರನ್ನು ಸೂಕ್ತ ಸ್ಥಳದಲ್ಲಿ ಹೊಂಡ ತೆಗೆದು ಸಂಗ್ರಹಣೆ ಮಾಡಿ, ಬೆಳೆಗಳಿಗೆ ನೀರಿನ ಅಭಾವದ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸಲು ಅನುಕೂಲವಾಗುವಂತೆ ರಾಜ್ಯ ವಿಪತ್ತು ಉಪಶಮನ ನಿಧಿಯಿಂದ (SDMF) ರೂ.100.00ಕೋಟಿಗಳ ಅನುದಾನವನ್ನು ಕೃಷಿ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ.<br><br>7) ಬರ ಪರಿಸ್ಥಿತಿಯಿಂದ ಉಂಟಾದ ನೀರಿನ ಅಭಾವದ ಪರಿಸ್ಥಿತಿಯನ್ನು ನಿಭಾಯಿಸಲು ಸಣ್ಣ ನೀರಾವರಿ ಇಲಾಖೆಗೆ ಸೇರಿರುವ 93 ಕೆರೆಗಳ / ಟ್ಯಾಂಕರ್‌ಗಳ ಸುಧಾರಣೆ ಕಾಮಗಾರಿಗೆ ರಾಜ್ಯ ವಿಪತ್ತು ಉಪಶಮನ ನಿಧಿಯಿಂದ ರೂ.100.00ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.<br><br>8) ಕುಡಿಯುವ ನೀರಿನ ಅಭಾವ ತಡೆಗಟ್ಟಲು ರಾಜ್ಯದಲ್ಲಿ 628 ಗ್ರಾಮಗಳಿಗೆ 899 ಟ್ಯಾಂಕರ್ ಮೂಲಕ 1842 ಗ್ರಾಮಗಳಲ್ಲಿ 2217 ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಆಧಾರದ ಮೇರೆಗೆ ಪಡೆದು 13 ನಗರ ಸ್ಥಳೀಯ ಸಂಸ್ಥೆಗಳಲ್ಲಿನ 198 ವಾರ್ಡ್‌ಗಳಲ್ಲಿ 121 ಟ್ಯಾಂಕರ್‌ಗಳ ಮೂಲಕ ಹಾಗೂ 35 ವಾರ್ಡ್‌ಗಳಲ್ಲಿ 21 ಖಾಸಗಿ ಬೋರ್‌ವೆಲ್‌ಗಳ ಮೂಲಕ ತುರ್ತು ಕುಡಿಯುವ ನೀರು ಪೂರೈಸಲಾಗಿದೆ. |
| (ಇ) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ವರ್ಷ ಬರ ಪರಿಹಾರಕ್ಕಾಗಿ ಯಾವ ಯಾವ ಬಾಬ್ತುಗಳಿಗೆ ಎಷ್ಟೆಷ್ಟು ಹಣವನ್ನು ಮಂಜೂರು ಮಾಡಲಾಗಿದೆ. ಹಾಗೂ ಸದರಿ ಜಿಲ್ಲೆಯ ರೈತರಿಗೆ ನೀಡಲು ಬಾಕಿ ಇರುವ ಪರಿಹಾರದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)<br><br>(ಈ) ಕೂಡಲೇ ಸದರಿ ಪರಿಹಾರ ಒದಗಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು? | ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿಗೆ ನೀಡಬಹುದಾದ ಪರಿಹಾರದ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11.07.2023 ರಂದು ಹೊರಡಿಸಿರುವ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ/ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ಮಾರ್ಗಸೂಚಿಗಳನ್ವಯ ಬರ ನಿರ್ವಹಣೆ ಕ್ರಮಗಳನ್ನು ಕೈಗೊಳ್ಳಲು ಮೈಸೂರು ಜಿಲ್ಲಾಧಿಕಾರಿಗಳಿಗೆ ರೊ13.50 ಕೋಟಿಗಳನ್ನು ಮತ್ತು ಚಾಮರಾಜನಗರ ಜಿಲ್ಲಾಧಿಕಾರಿಗಳಿಗೆ ರೊ7.50 ಕೋಟಿಗಳನ್ನು ಬಿಡುಗಡೆಮಾಡಲಾಗಿದೆ.<br><br>ಮೈಸೂರು ಜಿಲ್ಲೆಯಲ್ಲಿ 1,42,389 ಅರ್ಹ ರೈತ |

| | |
|---|---|
| | ಫಲಾನುಭವಿಗಳಿಗೆ ರೂ.82.87 ಕೋಟಿಗಳನ್ನು ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ 57,328 ರೈತರುಗಳಿಗೆ ರೂ.40.23 ಕೋಟಿಗಳ ಬೆಳೆಹಾನಿ ಪರಿಹಾರ ಮೊತ್ತವನ್ನು ಅರ್ಹ ರೈತ ಫಲಾನುಭವಿಗಳಿಗೆ ನೇರವಾಗಿ ಆಧಾರ್ ಜೋಡಣೆಯಾಗಿರುವ ಅವರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗಿದೆ. |

ಕಂಇ 338 ಟಿಎನ್‌ಆರ್ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು